All India Radio: Bangalore
National Bulletin In Kannada
ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

23.12.2025 19.35 p.m.

***************

ಮುಖ್ಯಾಂಶಗಳು

- ನವದೆಹಲಿಯಲ್ಲಿಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಂದ ೨೦೨೫ರ ರಾಷ್ಟ್ರೀಯ ವಿಜ್ಞಾನ ಪ್ರಶಸ್ತಿ ಪ್ರದಾನ
- ಇಸ್ರೋದಿಂದ ನಾಳೆ ಬ್ಲೂಬರ್ಡ್ ಬ್ಲಾಕ್-೨ ಸಂವಹನ ಉಪಗ್ರಹ ಉಡಾವಣೆ
- ಮಧ್ಯಪ್ರದೇಶ, ಛತ್ತೀಸ್‌ಗಢದ ಎಲ್ಲಾ ವಿಧಾನಸಭೆ ಕ್ಷೇತ್ರಗಳ ಕರಡು ಮತದಾರರ ಪಟ್ಟಿ ಪ್ರಕಟಿಸಿದ ಚುನಾವಣಾ ಆಯೋಗ
- ಮಹಿಳಾ ಟಿ-೨೦ ಕ್ರಿಕೆಟ್; ಶ್ರೀಲಂಕಾ ವಿರುದ್ಧ ಟಾಸ್ ಗೆದ್ದ ಭಾರತ ಫೀಲ್ಡಿಂಗ್ ಆಯ್ಕೆ

***************

ನವದೆಹಲಿಯ ರಾಷ್ಟ್ರಪತಿ ಭವನದಲ್ಲಿಂದು ನಡೆದ ಸಮಾರಂಭದಲ್ಲಿ ೨೦೨೫ರ ರಾಷ್ಟ್ರೀಯ ವಿಜ್ಞಾನ ಪುರಸ್ಕಾರವನ್ನು ರಾಷ್ಟ್ರಪತಿ ದ್ರೌಪದಿ ಮುರ್ಮು ಪ್ರದಾನ ಮಾಡಿದರು.

ವಿಜ್ಞಾನ, ತಂತ್ರಜ್ಞಾನ ಮತ್ತು ನಾವೀನ್ಯತೆ ಕ್ಷೇತ್ರಗಳಲ್ಲಿ ಅಸಾಧಾರಣ ಕೊಡುಗೆಗಾಗಿ ನೀಡುವ ದೇಶದ ಅತ್ಯುನ್ನತ ಮನ್ನಣೆ ಇದಾಗಿದೆ. ವಿಜ್ಞಾನ ರತ್ನ, ವಿಜ್ಞಾನ ಶ್ರೀ, ವಿಜ್ಞಾನ ಯುವ ಶಾಂತಿ ಸ್ವರೂಪ್ ಭಟ್ನಾಗರ್ ಮತ್ತು ವಿಜ್ಞಾನ ತಂಡ ಸೇರಿದಂತೆ ನಾಲ್ಕು ವಿಭಾಗಗಳ ಅಡಿಯಲ್ಲಿ ಪ್ರಶಸ್ತಿಗಳನ್ನು ನೀಡಲಾಯಿತು.

ಪದ್ಮವಿಭೂಷಣ ಪ್ರೊಫೆಸರ್ ಜಯಂತ್ ವಿಷ್ಣು ನಾರ್ಲಿಕರ್ ಅವರಿಗೆ ಮರಣೋತ್ತರವಾಗಿ ವಿಜ್ಞಾನ ರತ್ನ ಪ್ರಶಸ್ತಿ ನೀಡಿ ಗೌರವಿಸಲಾಯಿತು. ಎಂಟು ವಿಜ್ಞಾನಿಗಳಿಗೆ ವಿಜ್ಞಾನ ಶ್ರೀ ಪ್ರಶಸ್ತಿ ಮತ್ತು ೧೪ ಯುವ ವಿಜ್ಞಾನಿಗಳಿಗೆ ವಿಜ್ಞಾನ ಯುವ ವಿಭಾಗದಡಿಯಲ್ಲಿ ಪ್ರಶಸ್ತಿಗಳನ್ನು ಪ್ರದಾನ ಮಾಡಲಾಯಿತು.

ಇದೇ ವೇಳೆ, ವಿಜ್ಞಾನ ತಂಡ ಪ್ರಶಸ್ತಿಯನ್ನು ಟೀಂ ಆರೋಮಾ ಮಿಷನ್ ಸಿಎಸ್‌ಐಆರ್‌ಗೆ ನೀಡಲಾಯಿತು.

***************

ಆರ್ಥಿಕ ಹೂಡಿಕೆ ಮತ್ತು ಬೆಳವಣಿಗೆಯ ಪ್ರಮುಖ ಅಂಶಗಳಲ್ಲಿ ಭದ್ರತೆಯೂ ಒಂದು. ಸಮೃದ್ಧ ಭಾರತವನ್ನು ನಿರ್ಮಿಸಲು, ಸುರಕ್ಷಿತ ಭಾರತವನ್ನು ನಿರ್ಮಿಸುವುದು ಅಗತ್ಯ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಪ್ರತಿಪಾದಿಸಿದ್ದಾರೆ.

ನವದೆಹಲಿಯಲ್ಲಿ ಇಂದು ಗುಪ್ತಚರ ದಳದ ಶತಮಾನೋತ್ಸವದ ೩೮ನೇ ದತ್ತಿ ಉಪನ್ಯಾಸ ನೀಡಿದ ಅವರು, ಭಾರತ ಬಹು ಆಯಾಮದ ಭದ್ರತಾ ಸವಾಲುಗಳು ಮತ್ತು ಬೆದರಿಕೆಗಳನ್ನು ಎದುರಿಸುತ್ತಿದೆ. ಗಡಿ ಪ್ರದೇಶಗಳಲ್ಲಿನ ಉದ್ವಿಗ್ನತೆ, ಭಯೋತ್ಪಾದನೆ, ದಂಗೆ ಮತ್ತು ಕೋಮುವಾದ, ಭದ್ರತಾ ಕಾಳಜಿಯ ವಿಷಯಗಳಾಗಿವೆ ಎಂದು ಹೇಳಿದರು.

ಇತ್ತೀಚಿನ ವರ್ಷಗಳಲ್ಲಿ ಸೈಬರ್ ಅಪರಾಧಗಳು ಗಣನೀಯ ಭದ್ರತಾ ಬೆದರಿಕೆಯಾಗಿ ಹೊರಹೊಮ್ಮಿದೆ. ದೇಶದ ಯಾವುದೇ ಭಾಗದಲ್ಲಿ ಭದ್ರತೆ ಕೊರತೆಯು ಆ ಪ್ರದೇಶವನ್ನು ಮೀರಿದ ಆರ್ಥಿಕ ಪರಿಣಾಮವನ್ನು ಉಂಟು ಮಾಡುತ್ತದೆ ಎಂದರು.

ಶೀಘ್ರದಲ್ಲೇ ಎಡಪಂಥೀಯ ಉಗ್ರವಾದ ಸಂಪೂರ್ಣವಾಗಿ ನಿರ್ಮೂಲನೆಯಾಗಲಿದೆ. ಭದ್ರತಾ ಪಡೆಗಳ ತೀವ್ರ ಕ್ರಮವು ಎಡಪಂಥೀಯ ಉಗ್ರವಾದದ ನಿರ್ಮೂಲನೆಗೆ ಪ್ರಮುಖ ಕಾರಣವಾಗಿದೆ ಎಂದು ರಾಷ್ಟ್ರಪತಿ ದ್ರೌಪದಿ ಮುರ್ಮು ಹೇಳಿದರು.

***************

ಇತ್ತೀಚೆಗೆ ಯಶಸ್ವಿಯಾಗಿ ಪೂರ್ಣಗೊಂಡ ಭಾರತ-ನ್ಯೂಜಿಲೆಂಡ್ ಮುಕ್ತ ವ್ಯಾಪಾರ ಒಪ್ಪಂದವನ್ನು ಐತಿಹಾಸಿಕ ಮೈಲಿಗಲ್ಲು ಎಂದು ಪ್ರಧಾನಿ ನರೇಂದ್ರ ಮೋದಿ ಶ್ಲಾಘಿಸಿದ್ದಾರೆ.

ಇದು ಭಾರತದ ಮೊದಲ ಮಹಿಳಾ ನೇತೃತ್ವದ ಎಫ್‌ಟಿಎ ಆಗಿದೆ. ಮಾತುಕತೆ ತಂಡದಲ್ಲಿ ಬಹುತೇಕ ಮಹಿಳೆಯರೇ ಇದ್ದರು ಎಂದು ಪ್ರಧಾನಿ ಹೇಳಿದರು.

ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಶ್ ಗೋಯಲ್ ಲೇಖನ ಹಂಚಿಕೊಂಡಿರುವ ಅವರು, ಭಾರತದ ಎಫ್‌ಟಿಎಗಳು ಇಂದು ಸುಂಕ ಕಡಿತವನ್ನು ಮೀರಿ, ಆರ್ಥಿಕತೆಯನ್ನು ಬಲಪಡಿಸುವ ಮತ್ತು ಲಕ್ಷಾಂತರ ಜನರ ಜೀವನವನ್ನು ಸುಧಾರಿಸುವ ಧ್ಯೇಯದ ಭಾಗವಾಗಿದೆ ಎಂದರು.

ಸಚಿವ ಪಿಯೂಶ್ ಗೋಯಲ್ ತಮ್ಮ ಲೇಖನದಲ್ಲಿ, ಈ ವ್ಯಾಪಾರ ಒಪ್ಪಂದವು ಭಾರತ ವ್ಯಾಪಾರ ರಾಜತಾಂತ್ರಿಕತೆಯಲ್ಲಿ ಮಹತ್ವದ ಮುನ್ನಡೆಯನ್ನು ಹೇಗೆ ಗುರುತಿಸುತ್ತದೆ ಎಂಬುದನ್ನು ವಿವರಿಸಿದ್ದಾರೆ.

ದೇಶಾದ್ಯಂತ ಸಣ್ಣ ವ್ಯಾಪಾರಿಗಳು, ವಿದ್ಯಾರ್ಥಿಗಳು, ಮಹಿಳೆಯರು, ರೈತರು ಮತ್ತು ಯುವಕರಿಗೆ ಹೆಚ್ಚಿನ ಅವಕಾಶಗಳನ್ನು ಸೃಷ್ಟಿಸುವ ಮೂಲಕ ಎಫ್‌ಟಿಎ-ಬೆಳವಣಿಗೆ, ಉದ್ಯೋಗ ಮತ್ತು ಜಾಗತಿಕ ಮಾರುಕಟ್ಟೆ ಪ್ರವೇಶಕ್ಕೆ ನೂತನ ಮಾರ್ಗಗಳನ್ನು ತೆರೆಯುತ್ತದೆ ಎಂದು ಅವರು ತಿಳಿಸಿದ್ದಾರೆ.

ಭಾರತ-ನ್ಯೂಜಿಲೆಂಡ್ ಮುಕ್ತ ವ್ಯಾಪಾರ ಒಪ್ಪಂದವು ಪ್ರಧಾನಿ ನರೇಂದ್ರ ಮೋದಿ ನೇತೃತ್ವದಲ್ಲಿ ಪೂರ್ಣಗೊಂಡಿರುವ ೭ನೇ ವ್ಯಾಪಾರ ಒಪ್ಪಂದವಾಗಿದೆ. ಭಾರತದ ಬೆಳವಣಿಗೆಗೆ ಪೂರಕವಾದ ಜಾಗತಿಕ ಪಾಲುದಾರಿಕೆಗಳನ್ನು ವಿಸ್ತರಿಸುವ ಸ್ಥಿರ ಪ್ರಯತ್ನವನ್ನು ಇದು ಒತ್ತಿ ಹೇಳುತ್ತದೆ ಎಂದು ಸಚಿವ ಪಿಯೂಶ್ ಗೋಯಲ್ ಹೇಳಿದ್ದಾರೆ.

***************

ಭಾರತೀಯ ಬಾಹ್ಯಾಕಾಶ ಸಂಶೋಧನಾ ಸಂಸ್ಥೆ-ಇಸ್ರೋ ನಾಳೆ ಬ್ಲೂಬರ್ಡ್ ಬ್ಲಾಕ್-೨ ಎಂಬ ಸಂವಹನ ಉಪಗ್ರಹವನ್ನು ಉಡಾವಣೆ ಮಾಡಲಿದೆ.

ಶ್ರೀಹರಿಕೋಟಾದ ಸತೀಶ್ ಧವನ್ ಬಾಹ್ಯಾಕಾಶ ಕೇಂದ್ರದಿಂದ ನಾಳೆ ಬೆಳಗ್ಗೆ ೮ ಗಂಟೆ ೫೪ ನಿಮಿಷಕ್ಕೆ ಎಲ್‌ವಿಎಂ೩-ಎಂ೬ ಮೂಲಕ ಉಪಗ್ರಹ ಉಡಾವಣೆಯಾಗಲಿದೆ.

ಅಮೆರಿಕದ ಎಎಸ್‌ಟಿ ಸ್ಪೇಸ್‌ಮೊಬೈಲ್ ಸಂಸ್ಥೆಗೆ ಸೇರಿದ ಈ ಉಪಗ್ರಹವು ಭೂಮಿಯ ಕೆಳ ಕಕ್ಷೆ ತಲುಪುವ ಅತಿದೊಡ್ಡ ವಾಣಿಜ್ಯ ಸಂವಹನ ಉಪಗ್ರಹವಾಗಿರಲಿದೆ.

ಇದು ಮುಂದಿನ ತಲೆಮಾರಿನ ಬ್ಲೂಬರ್ಡ್ ಬ್ಲಾಕ್-೨ ಸಂವಹನ ಉಪಗ್ರಹಗಳ ಭಾಗವಾಗಿದ್ದು, ಸಾಮಾನ್ಯ ಮೊಬೈಲ್ ಸ್ಮಾರ್ಟ್‌ಫೋನ್‌ಗಳಿಗೆ ನೇರವಾಗಿ ಬಾಹ್ಯಾಕಾಶ ಆಧಾರಿತ ಸೆಲ್ಯುಲರ್ ಬ್ರಾಡ್‌ಬ್ಯಾಂಡ್ ಸಂಪರ್ಕವನ್ನು ಒದಗಿಸುವಂತೆ ವಿನ್ಯಾಸಗೊಳಿಸಲಾಗಿದೆ.

***************

ಮಧ್ಯಪ್ರದೇಶದ ಎಲ್ಲಾ ೨೩೦ ವಿಧಾನಸಭಾ ಕ್ಷೇತ್ರಗಳಲ್ಲಿ ಕರಡು ಮತದಾರರ ಪಟ್ಟಿಯನ್ನು ಚುನಾವಣಾ ಆಯೋಗ ಇಂದು ಪ್ರಕಟಿಸಿದೆ.

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆಯ ನಂತರ ಈ ಪಟ್ಟಿಯನ್ನು ಆಯೋಗ ಬಿಡುಗಡೆ ಮಾಡಿದೆ.

ಮತದಾರರು ತಮ್ಮ ಹೆಸರುಗಳನ್ನು ಸೇರಿಸಲು, ತಿದ್ದುಪಡಿಗಳನ್ನು ಮಾಡಲು ಅಥವಾ ಮತದಾರರ ಪಟ್ಟಿಯಿಂದ ಹೆಸರುಗಳನ್ನು ತೆಗೆದುಹಾಕಲು ಇದು ಒಂದು ಅವಕಾಶವಾಗಿದೆ.

ಚುನಾವಣಾ ಆಯೋಗದ ಜಾಲತಾಣದಲ್ಲಿ ಕರಡು ಮತದಾರರ ಪಟ್ಟಿಯನ್ನು ಮತದಾರರು ಪರಿಶೀಲಿಸಬಹುದು. ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣಾ ಪ್ರಕ್ರಿಯೆಯ ಮೂಲಕ

ಮೃತ ಮತದಾರರ ಹೆಸರುಗಳು, ಸ್ಥಳಾಂತರಗೊಂಡ ಮತದಾರರು ಮತ್ತು ನಕಲಿ ಹೆಸರುಗಳನ್ನು ತೆಗೆದು ಹಾಕಲಾಗಿದೆ.

ಪಟ್ಟಿಯಲ್ಲಿ ಹೆಸರುಗಳು ಇರದ ಮತದಾರರು ತಮ್ಮ ಹೆಸರುಗಳನ್ನು ಸೇರಿಸಲು ಅಗತ್ಯ ದಾಖಲೆಗಳೊಂದಿಗೆ ಹಕ್ಕು ಮತ್ತು ಆಕ್ಷೇಪಗಳನ್ನು ಸಲ್ಲಿಸಬಹುದು. ಹಕ್ಕು ಮತ್ತು ಆಕ್ಷೇಪಣೆಗಳನ್ನು ಸಲ್ಲಿಸಲು ೨೦೨೬ರ ಜನವರಿ ೨೨ ಕೊನೆಯ ದಿನವಾಗಿದೆ. ಅಂತಿಮ ಮತದಾರರ ಪಟ್ಟಿಯನ್ನು ೨೦೨೬ರ ಫೆಬ್ರವರಿ ೨೧ ರಂದು ಪ್ರಕಟಿಸಲಾಗುವುದು ಎಂದು ಚುನಾವಣಾ ಆಯೋಗ ತಿಳಿಸಿದೆ.

***************

ಮತದಾರರ ಪಟ್ಟಿಯ ವಿಶೇಷ ತೀವ್ರ ಪರಿಷ್ಕರಣೆ ಅಡಿಯಲ್ಲಿ ಛತ್ತೀಸ್‌ಗಢದಲ್ಲಿ ಇಂದು ಕರಡು ಮತದಾರರ ಪಟ್ಟಿಯನ್ನು ಚುನಾವಣಾ ಆಯೋಗ ಬಿಡುಗಡೆಗೊಳಿಸಿದೆ.

ಈ ಕುರಿತು ಆಕಾಶವಾಣಿ ನ್ಯೂಸ್‌ಗೆ ಮಾಹಿತಿ ನೀಡಿದ ಛತ್ತೀಸ್‌ಗಢದ ಮುಖ್ಯ ಚುನಾವಣಾಧಿಕಾರಿ ಯಶವಂತ್ ಕುಮಾರ್, ಛತ್ತೀಸ್‌ಗಢದ ಒಟ್ಟು ೧ ಕೋಟಿ ೮೪ ಲಕ್ಷ ೯೫ ಸಾವಿರದ ೯೨೦ ಮತದಾರರಿಂದ ಅರ್ಜಿ ನಮೂನೆಗಳನ್ನು ಸ್ವೀಕರಿಸಲಾಗಿದೆ. ಇದೇ ವೇಳೆ, ೬ ಲಕ್ಷದ ೪೨ ಸಾವಿರ ೨೩೪ ಮತದಾರರು ಸಾವನ್ನಪ್ಪಿದ್ದಾರೆ ಎಂದು ತಿಳಿಸಿದರು.

ಕರಡು ಮತದಾರರ ಪಟ್ಟಿಗೆ ಸಂಬಂಧಿಸಿದ ಹಕ್ಕುಗಳು ಮತ್ತು ಆಕ್ಷೇಪಗಳನ್ನು ಇಂದಿನಿಂದ ಜನವರಿ ೨೨ ರವರೆಗೆ ಸ್ವೀಕರಿಸಲಾಗುವುದು. ಅಂತಿಮ ಮತದಾರರ ಪಟ್ಟಿಯನ್ನು ಫೆಬ್ರವರಿ ೨೧ ರಂದು ಪ್ರಕಟಿಸಲಾಗುವುದು ಎಂದು ಅವರು ಮಾಹಿತಿ ನೀಡಿದರು.

***************

ವಿಕಸಿತ ಭಾರತ ರೋಜ್‌ಗರ್ ಮತ್ತು ಆಜೀವಿಕಾ ಮಿಷನ್ ಕಾಯ್ದೆಯು ರೈತರು ಮತ್ತು ಕಾರ್ಮಿಕರ ಕಲ್ಯಾಣವನ್ನು ಮುನ್ನಡೆಸುವ ಗುರಿಯನ್ನು ಹೊಂದಿರುವ ಐತಿಹಾಸಿಕ ಉಪಕ್ರಮವಾಗಿದೆ ಎಂದು ಕೇಂದ್ರ ಕೃಷಿ ಮತ್ತು ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಹೇಳಿದ್ದಾರೆ.

ರಾಷ್ಟ್ರೀಯ ರೈತ ದಿನದ ಅಂಗವಾಗಿ ದೇಶಾದ್ಯಂತ ರೈತರೊಂದಿಗೆ ವರ್ಚುಯಲ್ ಸಂವಾದ ನಡೆಸಿದ ಸಚಿವರು ಈ ವಿಷಯ ತಿಳಿಸಿದರು.

ರೈತರು ಮತ್ತು ಕಾರ್ಮಿಕರ ಕಲ್ಯಾಣಕ್ಕಾಗಿ ಕಾಯ್ದೆಯಲ್ಲಿ ಬಲವಾದ ನಿಬಂಧನೆಗಳನ್ನು ಸೇರಿಸಲಾಗಿದೆ. ಈ ಹಿಂದೆ ಜಾರಿಗೆ ತಂದಿರುವ ಮಹಾತ್ಮಗಾಂಧಿ ರಾಷ್ಟ್ರೀಯ ಉದ್ಯೋಗ ಖಾತರಿ ಕಾಯ್ದೆಯನ್ನು ಈ ಕಾಯ್ದೆ ಮತ್ತಷ್ಟು ಬಲಪಡಿಸಿದೆ. ಹಿಂದಿನ ೧೦೦ ದಿನಗಳ ಉದ್ಯೋಗ ದಿನಗಳನ್ನು ಈ ಕಾಯ್ದೆಯ ಮೂಲಕ ೧೨೫ ದಿನಗಳಿಗೆ ಹೆಚ್ಚಿಸಲಾಗಿದೆ ಎಂದು ಸಚಿವ ಶಿವರಾಜ್ ಸಿಂಗ್ ಚೌಹಾಣ್ ತಿಳಿಸಿದರು.

***************

ಅಂತಾರಾಷ್ಟ್ರೀಯ ನಾಗರಿಕ ವಿಮಾನಯಾನ ಸಂಸ್ಥೆ-ಐಸಿಎಒ ಮಂಡಳಿಗೆ ಅತ್ಯುನ್ನತ ಹುದ್ದೆಗಳೊಂದಿಗೆ ಭಾರತ ಮರು ಆಯ್ಕೆಯಾಗಿದೆ ಎಂದು ನಾಗರಿಕ ವಿಮಾನಯಾನ ಸಚಿವ ರಾಮ್ ಮೋಹನ್‌ನಾಯ್ಡು ತಿಳಿಸಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಭಾರತೀಯ ವಿಮಾನಯಾನ ಕ್ಷೇತ್ರವು ಜಾಗತಿಕ ಮನ್ನಣೆಯನ್ನು ಗಳಿಸಿದೆ. ಐಸಿಎಒ ನ ನೂತನ ಉಪಕ್ರಮಕ್ಕೆ ಭಾರತ ಬೆಂಬಲ ನೀಡುವ ಕುರಿತು ಪರಿಶೀಲನೆ ನಡೆಸಲಾಗುತ್ತಿದೆ. ಅಭಿವೃದ್ಧಿಶೀಲ ರಾಷ್ಟ್ರಗಳಿಗೆ ಸಹಾಯ ವಿಸ್ತರಿಸುವ ಹಾಗೂ ಐಸಿಎಒ ಮಾನದಂಡಗಳ ಪಾಲನೆ ನಿಟ್ಟಿನಲ್ಲಿ ಸಮನ್ವಯ ಸಾಧಿಸುವ ಮೂಲಕ ಭಾರತ ಪ್ರಮುಖ ಪಾಲುದಾರನಾಗಿ ಹೊರಹೊಮ್ಮಿದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಸಚಿವರು ಹೇಳಿದ್ದಾರೆ.

***************

ವಿಶಾಖಪಟ್ಟಣದ ಎಸಿಎ-ವಿಡಿಸಿಎ ಕ್ರಿಕೆಟ್ ಕ್ರೀಡಾಂಗಣದಲ್ಲಿ ಇಂದು ನಡೆಯಲಿರುವ ಅಂತಾರಾಷ್ಟ್ರೀಯ ಮಹಿಳಾ ಟಿ-೨೦ ಕ್ರಿಕೆಟ್ ಸರಣಿಯ ಎರಡನೇ ಪಂದ್ಯದಲ್ಲಿ ಶ್ರೀಲಂಕಾ ವಿರುದ್ಧ ಟಾಸ್ ಗೆದ್ದ ಭಾರತೀಯ ಮಹಿಳಾ ತಂಡ ಫೀಲ್ಡಿಂಗ್ ಆಯ್ಕೆ ಮಾಡಿಕೊಂಡಿದೆ.

ಮೊದಲು ಬ್ಯಾಟಿಂಗ್ ಮಾಡುತ್ತಿರುವ ಶ್ರೀಲಂಕಾ ಇತ್ತೀಚಿನ ವರದಿ ಬಂದಾಗ ೧೦ ಓವರ್‌ಗಳಲ್ಲಿ ೨ ವಿಕೆಟ್ ನಷ್ಟಕ್ಕೆ ೬೬ ರನ್ ಗಳಿಸಿ ಆಡುತ್ತಿದೆ.

*******ಮುಕ್ತಾಯ********